## ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

**ಸಿ.ಸಿ. 54/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 5**

**ದಿನಾಂಕಃ 28.07.2026** **ಸಿಡಬ್ಲ್ಯೂ 7**

| | |
|---|---|
| ಹೆಸರು | ಪ್ರಶಾಂತಕುಮಾರ |
| ತಂದೆ ಹೆಸರು | ರೇವಣಸಿದ್ದಪ್ಪ |
| ವಯಸ್ಸು | 40 ವರ್ಷ |
| ಉದ್ಯೋಗ | ಚಾಲಕ ವ ನಿರ್ವಾಹಕ |
| ವಾಸ ಸ್ಥಳ | ಸೊಕ್ಕೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಆ ದಿನ ಬಸ್ ನಲ್ಲಿ ಪ್ರಯಾಣಿಕರಿಗೆ ಹಿಂದೆ ಟಿಕೆಟನ್ನು ಕೊಡುತ್ತಿರುವಾಗ ಒಮ್ಮೆಲೇ ಸಪ್ಪಳ ಆಗಿದ್ದರಿಂದ ಇಳಿದು ನೋಡಿದಾಗ ಬಸ್ ಚಾನಲ್ ಗೆ ಡಿಕ್ಕಿ ಹೊಡೆದಿರುತ್ತದೆ. ಅಪಘಾತ ಹೇಗೆ ಆಯಿತು ಎಂದು ನನಗೆ ಗೊತ್ತಿರುವುದಿಲ್ಲ. ನಾನು ಪೋಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ15.06.2023 ರಂದು ಬೆಳಗ್ಗೆ 9.30 ಗಂಟೆಗೆ ದಾವಣಗೆರೆ ಹೊರಟು ಹರಿಹರಕ್ಕೆ ಬಂದು ವಾಪಸ್ ದಾವಣಗೆರೆಗೆ ಹೋಗಿ ನಂತರ ಸಂಕ್ಲೀಪುರಕ್ಕೆ ಹೋಗಿ ವಾಪಸ್ ದಾವಣಗೆರೆಗೆ ಬಂದು ರಾತ್ರಿ 7.30 ಗಂಟೆಗೆ ದಾವಣಗೆರೆ ಬಸ್ ನಿಲ್ದಾಣದಿಂದ ಪ್ರಯಾಣಿಕರನ್ನು ಹತ್ತಿಸಿಕೊಂಡು ದೇವರಬೆಳಕೆರೆ ಮಾರ್ಗವಾಗಿ ಸಂಕ್ಲೀಪುರಕ್ಕೆ ಹೋಗುತ್ತಿರುವಾಗ ಬಸ್ ಚಾಲಕನು ಬಸನ್ನು ಅತೀವೇಗ ಹಾಗೂ ನಿರ್ಲಕ್ಷ್ಯತನದಿಂದ ಚಲಾಯಿಸಿಕೊಂಡು ಹೋಗಿ ದೇವರಬೆಳಕೆರೆ ಗ್ರಾಮದ ಹತ್ತಿರ ಹಾದುಹೋಗಿರುವ ಚಾನಲ್ ಗೆ ಡಿಕ್ಕಿ ಪಡಿಸಿರುತ್ತಾನೆ ಎಂದರೆ ಸರಿಯಲ್ಲ. ಬಸ್ ನಲ್ಲಿದ್ದ 3 ಜನ ಪ್ರಯಾಣಿಕರಿಗೆ ಗಾಯಗಳು ಆಗಿದ್ದು ಅವರನ್ನು ನಾನು ಆಸ್ಪತ್ರೆಗೆ ಕಳುಹಿಸಿರುತ್ತೇನೆ ಎಂದರೆ ಸರಿ. ಅಪಘಾತವು ಆರೋಪಿ ತಪ್ಪಿನಿಂದ ಆಗಿದೆ ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯನ್ನು ನಿಪಿ.7 ಎಂದು ಗುರುತಿಸಲಾಯಿತು. ಅಪಘಾತವು ಆರೋಪಿಯ ತಪ್ಪಿನಿಂದ ಆಗಿದ್ದರೂ ಸಹ ಆಗಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ಶ್ರೀ ಬಿ ಟಿ ವಕೀಲರಿಂದಃ ಇರುವುದಿಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.